# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಸದಸ್ಯರ ಹೆಸರು | : | ಶ್ರೀ ಶರವಣ.ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) |
| 2 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2151(2327) |
| 3 | ಉತ್ತರಿಸಬೇಕಾದ ದಿನಾಂಕ | : | 27.03.2026 |
| 4 | ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| 1 | ನರೇಗಾ ಯೋಜನೆಯಡಿಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ಎಷ್ಟು; ಅವರಿಗೆ ಪಾವತಿಸುತ್ತಿರುವ ಗೌರವ ಧನವೆಷ್ಟು:ಗೌರವ ಧನ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಪಾವತಿಗೆ ಬಾಕಿ ಇರಲು ಕಾರಣಗಳೇನು: ಯಾವ ಕಾಲಮಿತಿಯಲ್ಲಿ ಪಾವತಿಸಲಾಗುವುದು; | ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ರಾಜ್ಯದ ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯತಿ ಮಟ್ಟದಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಒಟ್ಟು 3131 ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ.<br>ನರೇಗಾ ಯೋಜನೆಯಡಿ ಆಡಳಿತಾತ್ಮಕ ಅನುದಾನವು ಸಂಪೂರ್ಣವಾಗಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗುತ್ತಿದ್ದು, ಪ್ರಸ್ತುತ ಆರ್ಥಿಕ ವರ್ಷದಲ್ಲಿ ಎಲ್ಲಾ ಜಿಲ್ಲಾ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ಸಿಬ್ಬಂದಿಗಳಿಗೆ ಜನವರಿ-2026 ರ ಮಾಹೆಯವರೆಗೆ ವೇತನ ಪಾವತಿಗೆ ಒಟ್ಟು ಮೊತ್ತ ರೂ. 127.82 ಕೋಟಿಗಳ ಅನುದಾನ ಬಿಡುಗಡೆಗೊಳಿಸಲಾಗಿರುತ್ತದೆ. |
| 2 | ಸದರಿ ಸಿಬ್ಬಂದಿಗಳಿಗೆ ವೈದ್ಯಕೀಯ ಸೌಲಭ್ಯ, ಉದ್ಯೋಗ ಭದ್ರತೆ ಸೇರಿದಂತೆ ಇತರೆ ಸೌಲಭ್ಯಗಳನ್ನು ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: | ಸಚಿವ ಸಂಪುಟದ ನಿರ್ಣಯದಂತೆ, 2025-26ನೇ ಸಾಲಿಗೆ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ (ESI ಸೌಲಭ್ಯವನ್ನು ಪಡೆಯುತ್ತಿರುವ ಸಿಬ್ಬಂದಿಗಳನ್ನು ಹೊರತುಪಡಿಸಿ) ಸಾಮೂಹಿಕ ಆರೋಗ್ಯ ವಿಮೆ ಮಾಡಲು ಕ್ರಮ ವಹಿಸಲಾಗುತ್ತಿದೆ.<br>ಸರ್ಕಾರಿ ಆದೇಶ ಸಂ:ಆರ್‌ಡಿಪಿಆರ್:15:ಆರ್-1:2025 (ಇ-1674671) ದಿನಾಂಕ:07-02-2025 ರಂತೆ, ಸಾಮೂಹಿಕ ವಿಮಾ ಸೌಲಭ್ಯವನ್ನು ಒದಗಿಸಲು ಕ್ರಮ ವಹಿಸಲಾಗಿದ್ದು, ಪ್ರತಿ ವಿಮೆಯಲ್ಲಿ ಉದ್ಯೋಗಿ, ಪತಿ/ಪತ್ನಿ, ಇಬ್ಬರು ಮಕ್ಕಳು ಮತ್ತು ಇಬ್ಬರು ಅವಲಂಬಿತ ಪೋಷಕರನ್ನೊಳಗೊಂಡಿದ್ದು, ವರ್ಷಕ್ಕೆ ರೂ.5.00 ಲಕ್ಷ ವಿಮಾ ಮೊತ್ತವಾಗಿರುತ್ತದೆ. |
| 3 | VBGRAM G ಯೋಜನೆಯಲ್ಲಿ ಸದರಿ ಸಿಬ್ಬಂದಿಯನ್ನು ಮುಂದುವರೆಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ: ಇದ್ದಲ್ಲಿ ಹೇಗೆ ಮುಂದುವರೆಸಲಾಗುವುದು: ಇಲ್ಲದಿದ್ದಲ್ಲ ಕಾರಣಗಳೇನು? | ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಕಾಯ್ದೆಯನ್ನು (MGNREGA) ಈ ಹಿಂದಿನಂತೆ ಅದರ ಮೂಲ ಸ್ವರೂಪದಲ್ಲಿಯೇ ಮರುಸ್ಥಾಪಿಸಬೇಕು ಎಂದು ದಿನಾಂಕ:04-02-2026 ರಂದು ಕರ್ನಾಟಕ ರಾಜ್ಯದ ಎರಡೂ ಸದನದಲ್ಲಿ (ವಿಧಾನ ಸಭೆ ಹಾಗೂ ವಿಧಾನ ಪರಿಷತ್) ನಿರ್ಧರಿಸಿ ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗಿರುತ್ತದೆ. |

**ಸಂಖ್ಯೆ: ಗ್ರಾಅಪ/133(23)/ಉಖಾಯೋ/2026, 2085842**

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ
ತಂತ್ರಜ್ಞಾನ ಸಚಿವರು